492

157ನೇ 8 = 44
4RR
140126

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ರವರ ನಿಯಮ 330 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ವಿಷಯ:** ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ, ಬಾರ್ಕಿ ಮತ್ತು ಮೊಗವೀರ ಸಮುದಾಯಗಳನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಕುರಿತು.

*******

**ಉತ್ತರ**:

ಸರ್ಕಾರದ ಆದೇಶ ಸಂಖ್ಯೆ:ಸಕಇ 169 ಎಸ್‌ಎಡಿ 2006 ದಿನಾಂಕ:08/04/2010 ರ ಆದೇಶದಲ್ಲಿ ರಾಜ್ಯದಲ್ಲಿನ ಗಂಗಾಮತ ಮತ್ತು ಅದರ ಉಪ ಜಾತಿಗಳ (ಕೋಲಿ, ಕಬ್ಬಲಿಗ, ಅಂಬಿಗ, ಬಾರ್ಕಿ ಒಳಗೊಂಡಂತೆ) ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕನ್ನಡ ವಿಶ್ವವಿದ್ಯಾಲಯ ಹಂಪಿ ಇವರ ಮೂಲಕ ಕುಲಶಾಸ್ತ್ರೀಯ ಅಧ್ಯಯನ ಕೈಗೊಂಡು ವರದಿ ಪಡೆದು ಸಲ್ಲಿಸಲು ಆದೇಶಿಸಲಾಗಿದೆ.

ಸರ್ಕಾರದ ಆದೇಶದನ್ವಯ ಗಂಗಾಮತ ಮತ್ತು ಅದರ ಉಪ ಜಾತಿಗಳ ಕುಲಶಾಸ್ತ್ರೀಯ ಅಧ್ಯಯನವನ್ನು ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರ ಮೂಲಕ ಕೈಗೊಂಡು ಅಂತಿಮ ವರದಿಯನ್ನು ದಿನಾಂಕ:17.02.2014 ರಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ರವರ ಮೂಲಕ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ರಾಜ್ಯ ಸರ್ಕಾರವು ಸದರಿ ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ನವದೆಹಲಿ ಇವರಿಗೆ ದಿನಾಂಕ:03.03.2014 ರಲ್ಲಿ ಕಳುಹಿಸಲಾಗಿರುತ್ತದೆ.

ಕರ್ನಾಟಕ ರಾಜ್ಯದಲ್ಲಿ ಗಂಗಾಮತ ಮತ್ತು ಅದರ ಉಪ ಜಾತಿಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಬಗ್ಗೆ ಈಗಾಗಲೇ ಭಾರತ ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರು ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ಸಮರ್ಥನೆ/ಸ್ಪಷ್ಟೀಕರಣ/ದಾಖಲಾತಿಗಳೊಂದಿಗೆ ವರದಿ ಸಲ್ಲಿಸುವಂತೆ ದಿನಾಂಕ:28.10.2024ರ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಲಾಗಿರುತ್ತದೆ.

ಅದರಂತೆ, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ರವರ ಪತ್ರ ದಿನಾಂಕ:29.11.2024ರಂದು ಗಂಗಾಮತ ಮತ್ತು ಅದರ ಉಪ ಜಾತಿಗಳನ್ನು (ಕೋಲಿ, ಕಬ್ಬಲಿಗ, ಅಂಬಿಗ, ಬಾರಿಕ ಒಳಗೊಂಡಂತೆ) ಕರ್ನಾಟಕ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸುವ ಸಂಬಂಧ ಕೈಗೊಂಡ ಕುಲಶಾಸ್ತ್ರೀಯ ಅಧ್ಯಯನ ವರದಿಗೆ ಕೇಂದ್ರ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರು ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ಮತ್ತೊಮ್ಮೆ ಸೂಕ್ತ ಸಮರ್ಥನೆ/ಸ್ಪಷ್ಟೀಕರಣ/ದಾಖಲಾತಿಗಳೊಂದಿಗೆ ವರದಿಯನ್ನು ಸಲ್ಲಿಸುವಂತೆ ಕುಲಸಚಿವರು, ಕನ್ನಡ ವಿಶ್ವ ವಿದ್ಯಾಲಯ, ಹಂಪಿ ವಿದ್ಯಾರಣ್ಯ ರವರಿಗೆ ಕೋರಲಾಗಿದ್ದು, ಕುಲಸಚಿವರು, ಕನ್ನಡ ವಿಶ್ವ ವಿದ್ಯಾಲಯ, ಹಂಪಿ ರವರಿಂದ ವರದಿ ಬಂದ ನಂತರ, ನಿಯಮಾನುಸಾರ ಪರಿಶೀಲಿಸಲಾಗುವುದು.

STW/SECB/SAD/144/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ